# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | 35 (100) |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 19-12-2022 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳ ಸಂಖ್ಯೆ ಎಷ್ಟು; | ಪ್ರಾಂಶುಪಾಲರ ಖಾಲಿ ಹುದ್ದೆಗಳ ಸಂಖ್ಯೆ: 426 |
| ಆ) | ಸದರಿ ಹುದ್ದೆಗಳಲ್ಲಿ ಬಡ್ತಿ ಹಾಗೂ ನೇರ ನೇಮಕಾತಿ ಹುದ್ದೆಗಳ ಸಂಖ್ಯೆ ಎಷ್ಟು; | ಬಡ್ತಿಗೆ ಮೀಸಲಾದ ಹುದ್ದೆಗಳ ಸಂಖ್ಯೆ:915<br><br>ನೇರ ನೇಮಕಾತಿಗೆ ಮೀಸಲಾದ ಹುದ್ದೆಗಳ ಸಂಖ್ಯೆ:305 |
| ಇ) | ನೇರ ನೇಮಕಾತಿ ಹುದ್ದೆಗಳನ್ನು ದೀರ್ಘಕಾಲದಿಂದ ಭರ್ತಿ ಮಾಡಿಕೊಳ್ಳದಿರುವುದರಿಂದ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಗಳಾಗುತ್ತಿಲ್ಲವೇ; ವಿಳಂಬಕ್ಕೆ ಕಾರಣಗಳೇನು; | ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಒಟ್ಟು 305 ಪ್ರಾಂಶುಪಾಲರ ಹುದ್ದೆಗಳಿಗೆ ಆಯಾ ಕಾಲೇಜಿನ ಹಿರಿಯ ಉಪನ್ಯಾಸಕರುಗಳನ್ನು ಕರ್ನಾಟಕ ನಾಗರಿಕ ಸೇವಾ ನಿಯಮಗಳ, ನಿಯಮ-68ರಡಿ ಪ್ರಾಚಾರ್ಯರ ಹುದ್ದೆಗೆ ಪ್ರಭಾರದಲ್ಲಿರಿಸಿ ಶೈಕ್ಷಣಿಕ, ಆಡಳಿತಾತ್ಮಕ ಚಟುವಟಿಕೆ ಮತ್ತು ಪರೀಕ್ಷಾ ಕಾರ್ಯಗಳಿಗೆ ತೊಂದರೆಯಾಗದಂತೆ ಕ್ರಮವಹಿಸಲಾಗುತ್ತಿದೆ.<br><br>ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಉಳಿದ ಮೂಲ ವೃಂದದ 216 ಮತ್ತು ಹೈದ್ರಾಬಾದ್ ಕರ್ನಾಟಕ ವೃಂದದ 39 ಹುದ್ದೆಗಳು ಸೇರಿ ಒಟ್ಟು 255 ಪ್ರಾಂಶುಪಾಲರ ಹುದ್ದೆಗಳ ಆಯ್ಕೆ ಪ್ರಕ್ರಿಯೆಯನ್ನು ಕೈಗೊಳ್ಳಲು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ದಿನಾಂಕ:10-04-2017, ದಿನಾಂಕ:18-04-2017 ಮತ್ತು ದಿನಾಂಕ:26-02-2019ರ ಪತ್ರಗಳಲ್ಲಿ ಕೋರಲಾಗಿತ್ತು. ಮಾನ್ಯ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:13-09-2019ರ ಸಭೆಯಲ್ಲಿ ಕೈಗೊಂಡ ನಿರ್ಣಯದನ್ವಯ ಖಾಲಿ ಇರುವ ಒಟ್ಟು 255 ಹುದ್ದೆಗಳ ಆಯ್ಕೆ ಪ್ರಕ್ರಿಯೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮುಖಾಂತರ ನಡೆಸಲು ದಿನಾಂಕ:18-03-2020ರ ಪತ್ರದಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರಿಗೆ ತಿಳಿಸಲಾಗಿದೆ.<br><br>ಈ ಮಧ್ಯೆ ಆರ್ಥಿಕ ಇಲಾಖೆಯು ದಿನಾಂಕ:06-07-2020ರ ಸುತ್ತೋಲೆಯಲ್ಲಿ ರಾಜ್ಯದಲ್ಲಿ ಕೋವಿಡ್-19 ರ ಹಿನ್ನೆಲೆಯಲ್ಲಿ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿದಿರುತ್ತದೆ.<br><br>ಏತನ್ಮಧ್ಯೆ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಪ್ರಾಂಶುಪಾಲರ ವೃಂದದ ನೇರ ನೇಮಕಾತಿಗೆ ನಿಗಧಿಪಡಿಸಲಾಗಿದ್ದ ಪಠ್ಯಕ್ರಮವನ್ನು ಪರಿಷ್ಕರಿಸುವ ಹಾಗೂ ಇನ್ನಿತರೆ ವಿಷಯಗಳ ಕುರಿತು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |

| | | |
|---|---|---|
| ಈ) | ನೇರ ನೇಮಕಾತಿ ಮಾಡುವ ಹುದ್ದೆಗಳನ್ನು ಒಂದು ಬಾರಿಗೆ ವಿಶೇಷ ಪ್ರಕರಣವೆಂದು ಪರಿಗಣಿಸಿ, ಬಡ್ತಿ ಮೂಲಕವೇ ಭರ್ತಿ ಮಾಡಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳವುದೇ; | ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಪ್ರಸ್ತುತ ಜಾರಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಪ್ರಾಂಶುಪಾಲರ ವೃಂದದ ಹುದ್ದೆಗಳನ್ನು ಶೇಕಡ 75:25ರ ಪ್ರಮಾಣದಲ್ಲಿ ಕ್ರಮವಾಗಿ ಬಡ್ತಿ ಮತ್ತು ನೇರ ನೇಮಕಾತಿ ಮೂಲಕ ತುಂಬಿಕೊಳ್ಳಬೇಕಾಗಿರುತ್ತದೆ. ಸದರಿ ನಿಯಮಗಳನ್ವಯ ನೇರ ನೇಮಕಾತಿ ಹುದ್ದೆಗಳನ್ನು ಬಡ್ತಿ ಮೂಲಕ ತುಂಬಿಕೊಳ್ಳಲು ಅವಕಾಶವಿರುವುದಿಲ್ಲ. |
| ಉ) | 1996-97ನೇ ಸಾಲಿನಿಂದ ಉಪನ್ಯಾಸಕರಾಗಿ ನೇಮಕಗೊಂಡು 25 ವರ್ಷ ಸೇವೆ ಸಲ್ಲಿಸಿದರೂ ಪ್ರಾಂಶುಪಾಲರ ಹುದ್ದೆಗೆ ಬಡ್ತಿ ಸಿಗದೆ ಇರುವವರಿಗೆ ಕೂಡಲೇ ಬಡ್ತಿ ನೀಡಲು ಕ್ರಮ ಕೈಗೊಳ್ಳಲಾಗುವುದೇ? | ಪ್ರಸ್ತುತ ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ದಿ:17-11-2022 ರ ಟಿಪ್ಪಣಿಯಲ್ಲಿ ರಾಜ್ಯಾಧೀನ ಸೇವೆಗಳಲ್ಲಿನ ನೇರ ನೇಮಕಾತಿ ಅಥವಾ ಪದೋನ್ನತಿಯಲ್ಲಿ ಅನುಸೂಚಿತ ಜಾತಿಗಳಿಗೆ ಮತ್ತು ಅನುಸೂಚಿತ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗೆ ಹೆಚ್ಚಿಸಲಾಗಿರುವ ಮೀಸಲಾತಿಯನ್ನು ಜಾರಿಗೊಳಿಸಲು ರೋಸ್ಟರ್ ಬಿಂದುಗಳನ್ನು ಗುರುತಿಸುವ ಪ್ರಕ್ರಿಯೆ ಅಂತಿಮಗೊಳ್ಳುವವರೆಗೂ ನೇರ ನೇಮಕಾತಿ ಮತ್ತು ಮುಂಬಡ್ತಿ ಪ್ರಕ್ರಿಯೆಗಳನ್ನು ತಡೆಹಿಡಿಯಲು ಸೂಚಿಸಿದ್ದು, ಸದರಿ ಆದೇಶವನ್ನು ಹಿಂಪಡೆದ ನಂತರ ಮುಂಬಡ್ತಿ ಪ್ರಕ್ರಿಯೆ ಕೈಗೊಳ್ಳಲಾಗುವುದು |

**ಸಂಖ್ಯೆ: ಇಪಿ 265 ಡಿಜಿಡಬ್ಲ್ಯೂ 2022**

(ಬಿ.ಸಿ. ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು